# ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶ್ಯ.ಶಾ./ಕೇ.ಮಾ.ಸಂ.ಅ.ಸ.ವಿ.ವೇ.2017.F.B./2017-18


ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.

ದಿನಾಂಕ: 15-07-2017.

## ಪ್ರಕಟಣೆ

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ ಮಾರ್ಚ್/ಏಪ್ರಿಲ್ 2017ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು Top 20th Percentile or 80th Percentileಗಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ Central Sector Scheme of Scholorship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:**www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ **2017ರ Fresh Batch**ನ ವಿದ್ಯಾರ್ಥಿಗಳು ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. (Link for submission of application - website:**www.scholarships.gov.in =»New User(Register).** ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೇ ಪೂರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೂಡಲೇ **ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ "online" ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.**

ಹಾಗೂ 2017ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಛಿಸುವ **ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್** ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ.

ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ **ದಿನಾಂಕದೊಳಗಾಗಿ ಸಲ್ಲಿಸುವುದು.**

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಇಲಾಖೆಗೆ ಸಲ್ಲಿಸಲು( Forward ಮಾಡಲು)** ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ **National e-Scholarship Portal**ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲಾಗುವುದು. ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: http://pue.kar.nic.in =» Scholarship =» MHRD Scholarship =» MHRD Scholarship 2017-Fresh batch**ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿರುತ್ತದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.